[C.R.P.67]

Form No.4 (civil)
Deposition Sheets
(R.P.No.57)

**2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ,**
**ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .**

ಸಿ.ಸಿ. ನಂ.146/2025

ಪ್ರಾ.ಸಾ.2 ಚಾ.ಸಾ.4

| | | |
|---|---|---|
| ಸಾಕ್ಷಿದಾರರ ಹೆಸರು | : | ಶಿವರಾಜ್ ಕೆ ಜಿ |
| ತಂದೆ ಹೆಸರು | : | ಗುಡ್ಡಪ್ಪ |
| ವಯಸ್ಸು | : | 32 ವರ್ಷಗಳು |
| ಉದ್ಯೋಗ | : | ಕೂಲಿ |
| ವಾಸ | : | ಕರೆಕಟ್ಟೆ ಗ್ರಾಮ , ಚನ್ನಗಿರಿ. |

ಪ್ರಮಾಣ ವಚನ ಬೋಧಿಸಿದ ದಿನಾಂಕಃ 03.07.2026

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

1) ಚಾಸಾ 1 ನನ್ನ ತಾಯಿ. ಚಾಸಾ 5 ನನ್ನ ದೊಡ್ಡಮ್ಮ. ಆರೋಪಿತರು ನನ್ನ ಸಂಬಂಧಿಗಳು .

2) ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿಲ್ಲ. ಆರೋಪಿತರು ನನಗೆ ಹಲ್ಲೆ ಮಾಡಿ ಪ್ರಾಣ ಬೆದರಿಕೆ ಹಾಕಿರುವುದಿಲ್ಲ. ಸುಮಾರು 2 ವರ್ಷಗಳ ಹಿಂದೆ ಆರೋಪಿಗಳು ಮತ್ತು ನಮ್ಮನಡುವೆ ಮನೆ ಜಾಗದ ವಿಚಾರವಾಗಿ ಮಾತುಕತೆಯಾಗಿತ್ತು ಅಷ್ಟೆ. ಆ ಸಂದರ್ಭದಲ್ಲಿ ಆರೋಪಿತರನ್ನು ಕರೆಯಿಸಿ ಠಾಣೆಗೆ ಬುದ್ದಿ ಹೇಳುವಂತೆ ಕೇಳಿಕೊಂಡಾಗ, ಠಾಣೆಯಲ್ಲಿ ನನ್ನಿಂದ ಕೆಲವು ದಾಖಲಾತಿಗಳಿಗೆ ಸಹಿಯನ್ನು ಪಡೆದುಕೊಂಡಿರುತ್ತಾರೆ, ಯಾವ ದಾಖಲೆಗಳಿಗೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಮಹಜರ್ ನ್ನು ನಿಪಿ.3 ಸಾಕ್ಷಿ ಸಹಿಯನ್ನು ನಿಪಿ 3(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಪೋಟೊ ಪ್ರತಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 4 ಎಂದು ಗುರುತಿಸಲಾಯಿತು. ಸದರಿ ಪೋಟೋವನ್ನು ಪೊಲೀಸರು ಕೇಳಿದ್ದರಿಂದ ತೆಗೆಸಿಕೊಂಡಿರುತ್ತೇನೆ ಯಾವ ವಿಚಾರಕ್ಕೆಂದು ನನಗೆ ಗೊತ್ತಿಲ್ಲ. ಪೊಲೀಸರ ಮುಂದೆ ನಾನು ಯಾವುದೇ ಹೇಳಿಕೆ ನೀಡಿಲ್ಲ. ನಿಪಿ.3 ರಲ್ಲಿರುವ ವಿಚಾರ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯಾಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕೆಂದು ಕೇಳಿಕೊಂಡಿರುತ್ತಾರೆ. ಆಲಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ಸಹಾಯ ಸರ್ಕಾರಿ ಅಭಿಯೋಜಕರಿಂದಃ

ಆರೋಪಿಗಳು ಮತ್ತು ನಮ್ಮ ನಡುವೆ ಮನೆಯ ಜಾಗದ ವಿಚಾರವಾಗಿ ಮನಸ್ಥಾಪ ಇತ್ತು ಎಂದರೆ ಸರಿ. ಸದರಿ ವಿಚಾರವಾಗಿ ಆರೋಪಿಗಳು ಇಸ್ವತ್ತು ಮಾಡಿಸಲು ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ಸದರಿ ವಿಚಾರವಾಗಿ ನಾನು ತಕರಾರು ಸಲ್ಲಿಸಿದ್ದೆ ಎಂದರೆ ಸರಿಯಲ್ಲ.

ದಿನಾಂಕಃ 14.03.2024 ರಂದು ಮದ್ಯಾಹ್ನ 3.30 ಗಂಟೆ ಸಮಯದಲ್ಲಿ ನಾನು ಮನೆಗೆ ಬರುತ್ತಿದ್ದಾಗ ಆರೋಪಿತರು ನನ್ನನ್ನು ಅಡ್ಡಗಟ್ಟಿ ಅವಾಚ್ಯ ಶಬ್ದಗಳಿಂದ ಬೈದು ನೆಲಕ್ಕೆ ಕೆಡವಿಕೊಂಡು ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ವಿಚಾರ ತಿಳಿದ ಚಾಸಾ 1 ಮತ್ತು ಚಾಸಾ 5 ರವರು ಜಗಳ ಬಿಡಿಸಲು ಹೋದಾಗ ಆರೋಪಿಗಳು ಚಾಸಾ 1 ಮತ್ತು 5 ರವರಿಗೂ ಸಹ ಹಲ್ಲೆ ಮಾಡಿ ಪ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಅದೇ ದಿನ ರಾತ್ರಿ 7.00 ಗಂಟೆ ಸಮಯಕ್ಕೆ ಆರೋಪಿಗಳು ನಮ್ಮ ಮನೆಯ ಬಳಿ ಬಂದು ಜಗಳ ಮಾಡಿ ಅವಾಚ್ಯ ಶಬ್ದಗಳಿಂದ ಬೈದು ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ಚಾಸಾ 1ರವರು ನಿಪಿ1 ರಂತೆ ದೂರು ನೀಡಿದ ಮೇರೆಗೆ ಪೊಲೀಸರು ನನ್ನ ಸಮಕ್ಷಮ ನಿಪಿ 3 ರಂತೆ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ.

ಇದೇ ವಿಚಾರವಾಗಿ ನಾನು ದಿಃ 04.04.2024 ರಂದು " ಕರೆಕಟ್ಟೆ -------- ಕೊಟ್ಟಿರುತ್ತಾರೆ " ಎಂಬ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ತಿರಸ್ಕರಿಸಿದ ಹೇಳಿಕೆಯ ಭಾಗವನ್ನು ನಿಪಿ 5 ಎಂದು ಗುರುತಿಸಲಾಯಿತು.

2. ನಾವು ಮತ್ತು ಆರೋಪಿತರು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿಯಲ್ಲ. ಆರೋಪಿಗಳು ನಮ್ಮ ವಿರುದ್ದ ದಾಖಲಿಸಿರುವ ಪ್ರಕರಣದಲ್ಲಿ ರಾಜಿಯಾಗುತ್ತಿರುವುದರಿಂದ ನಾನು ಈ ಪ್ರಕರಣದಲ್ಲಿ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರುಃ ಇಲ್ಲ ಎಂದು ನುಡಿಯುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚುಗಾರ್ತಿಯ  ಮೂಲಕ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ. ಸರಿ ಇದೆ.**

**02 ನೇ  ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು,**

**ಮತ್ತು ಜೆಎಂಎಫ್ ಸಿ, ಚನ್ನಗಿರಿ.**

PW-3
[C.R.P.67]

Form No.4 (civil)
Deposition Sheets
(R.P.No.57)

**2ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ,**
**ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .**

ಸಿ.ಸಿ. ನಂ. 2788/2024

ಪ್ರಾ.ಸಾ.6 ಚಾ.ಸಾ.3

ಸಾಕ್ಷಿದಾರರ ಹೆಸರು : ಫೈರೋಜ್ ಖಾನ್

ತಂದೆಯ ಹೆಸರು : ಅಬ್ಬಾಸ್ ಖಾನ್
ವಯಸ್ಸು : 42 ವರ್ಷಗಳು
ಉದ್ಯೋಗ : ಕೂಲಿ ಕೆಲಸ
ವಾಸ : ಕರೆಕಟ್ಟೆ ಗ್ರಾಮ , ಚನ್ನಗಿರಿ.

ಪ್ರಮಾಣ ವಚನ ಬೋಧಿಸಿದ ದಿನಾಂಕಃ 18-06-2026

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

1) ಚಾ.ಸಾ.1 ನನ್ನ ಅಕ್ಕನ ಮಗಳು. ಚಾಸಾ.5 ನನ್ನ ಭಾವ , ಚಾಸಾ.3 ನನ್ನ ಅಕ್ಕ, ಚಾಸಾ. 7 ನನ್ನ ತಮ್ಮ. 1ನೇ ಆರೋಪಿ ನನ್ನ ಅಕ್ಕನ ಮಗ ಗಂಡ. 2 ಮತ್ತು 3ನೇ ಆರೋಪಿತರು ನನ್ನ ಅಕ್ಕನ ಬೀಗರು.

2) ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿಲ್ಲ. ಚಾಸಾ.1 ಮತ್ತು ಆರೋಪಿತರು ಅನ್ಯೊನ್ಯವಾಗಿ ಇರುತ್ತಾರೆ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ. ನಿಪಿ.1 ಮತ್ತು 2 ರಲ್ಲಿರುವ ವಿಚಾರ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯಾಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕೆಂದು ಕೇಳಿಕೊಂಡಿರುತ್ತಾರೆ. ಆಲಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ಸಹಾಯ ಸರ್ಕಾರಿ ಅಭಿಯೋಜಕರಿಂದಃ

1. ಚಾಸಾ.1 ರವರನ್ನು 1 ನೇ ಆರೋಪಿಗೆ ಕೊಟ್ಟು ನನ್ನ ಅಕ್ಕ ಮದುವೆ ಮಾಡಿರುತ್ತೇವೆ ಎಂದರೆ ಸರಿ. ಆರೋಪಿತರು ಚಾಸಾ.1 ರವರನ್ನು ಮದವೆಯಾದ ಮೂರು ತಿಂಗಳ ವರಗೆ ಚನ್ನಾಗಿ ನೋಡಿಕೊಂಡು ಆನಂತರ ಸಣ್ಣ ಪುಟ್ಟ ವಿಚಾರಕ್ಕೆ ಬೈದಾಡುತ್ತಾ ದೈಹಿಕವಾಗಿ ಮತ್ತು ಮಾನಸಿಕವಾಗಿ ನಿನಗೆ ಇನ್ನೂ ಮಕ್ಕಳಾಗಿಲ್ಲ ಎಂದು ಬೈದಾಡಿ ನಿಮ್ಮ ಮನೆಯವರ ಹತ್ತಿರ ವರದಕ್ಷಿಣ ಹಣ ಮತ್ತು ಬಂಗಾರವನ್ನು ತೆಗೆದುಕೊಂಡು ಬಾ ಎಂದು ಪ್ರತಿದಿನ ಕಿರುಕುಳ ನೀಡುತ್ತಿದ್ದರು ಎಂದೆರ ಸರಿಯಲ್ಲ. ಸದರಿ ವಿಚಾರವನ್ನು ಚಾಸಾ.1 ರವರು ನನಗೆ ಮತ್ತು ಚಾಸಾ.4, ಚಾಸಾ.5 ಮತ್ತು 7 ರ ವರಗೆ ತಿಳಿಸಿದ್ದರು ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾವು ಆರೋಪಿತರಿಗೆ ಬುದ್ದಿ ಹೇಳಿ ಪಂಚಾಯತಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ದಿನಾಂಕಃ 24.04.2024 ರಂದು ಸಂಜೆ 6.30 ರ ಸಮಯದಲ್ಲಿ ನಾನು ಚಾಸಾ.1 ರವರನ್ನು ನಮ್ಮ ಮನೆಗೆ ಕರೆದುಕೊಂಡು ಹೋಗಲು ಬಂದಿದ್ದಾಗ ಆರೋಪಿತರು ನನಗೆ ಮತ್ತು ಚಾಸಾ.1 , 4 ಮತ್ತು 7 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಹಲ್ಲೆ ಮಾಡಿ ನಿಮ್ಮನ್ನು ಸುಮ್ಮನೆ ಬಿಡುವುದಿಲ್ಲ ಎಂದು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ಚಾಸಾ.1 ರವರು ನಿಪಿ.1 ರಂತೆ ದೂರು ನೀಡಿದ ಮೇರೆಗೆ ಪೋಲಿಸಿನವರು ನಿಪಿ.2 ರಂತೆ ಮಹಜರು ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ದಿನಾಂಕಃ 11.08.2024 ರಂದು " ನಾನು ------------------------------------ ನೀಡಿರುತ್ತೇನೆ “ ಎಂಬ ಹೇಳಿಕೆಯನ್ನು ನೀಡಿರುತ್ತೇನೆ ಎಂ ದರೆ ಸರಿಯಲ್ಲ. ತಿರಸ್ಕರಿಸಿದ ಹೇಳಿಕೆಯ ಭಾಗವನ್ನು ನಿಪಿ.5 ಎಂದು ಗುರುತಿಸಲಾಯಿತು.

2. ನಾವು ಮತ್ತು ಆರೋಪಿತರು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿಯಲ್ಲ. ಆರೋಪಿತರು ನಮ್ಮ ವಿರುದ್ಧ ದಾಖಲಿಸಿರುವ ಪ್ರಕರಣದಲ್ಲಿ ರಾಜಿಯಾಗಿರುವುದರಿಂದ, ನಾವು ಈ ಪ್ರಕರಣದಲ್ಲಿ ರಾಜಿಯಾಗುತ್ತಿದ್ದೇವೆ

ಎಂದರೆ ಸರಿಯಲ್ಲ. ಆ ಕಾರಣದಿಂದ ನನಗೆ ನಿಪಿ.1 ಮತ್ತು ನಿಪಿ.2 ರವರ ವಿಚಾರ ಗೊತ್ತಿದ್ದರೂ ಸಹಾ ಆರೋಪಿತರೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರುಃ ಇಲ್ಲ ಎಂದು ನುಡಿಯುತ್ತಾರೆ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚುಗಾರ್ತಿಯ ಮೂಲಕ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ. ಸರಿ ಇದೆ.**

**02 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು,**
**ಮತ್ತು ಜೆಎಂಎಫ್ ಸಿ, ಚನ್ನಗಿರಿ.**

PW-2

[C.R.P.67]

Form No.4 (civil)
Deposition Sheets
(R.P.No.57)

**2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ,**
**ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .**

ಸಿ.ಸಿ. ನಂ. 2788/2024

ಪ್ರಾ.ಸಾ.2 ಚಾ.ಸಾ.4

| | | |
|---|---|---|
| ಸಾಕ್ಷಿದಾರರ ಹೆಸರು | : | ನೂರ್ ಜಹಾನ್ ಖಾನಂ |
| ಗಂಡನ ಹೆಸರು | : | ಅಮಜ್ದ್ ಖಾನ್ |
| ವಯಸ್ಸು | : | 42 ವರ್ಷಗಳು |
| ಉದ್ಯೋಗ | : | ಗೃಹಿಣಿ |
| ವಾಸ | : | ದಾವಣಗೆರೆ, |

ಪ್ರಮಾಣ ವಚನ ಬೋಧಿಸಿದ ದಿನಾಂಕಃ 18-06-2026

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

1) ಚಾ.ಸಾ.1 ನನ್ನ ಮಗಳು. ಚಾಸಾ.5 ನನ್ನ ಗಂಡ. ಚಾಸಾ.6 ಮತ್ತು 7 ನನ್ನ ತಮ್ಮಂದಿರು. 1ನೇ ಆರೋಪಿ ನನ್ನ ಅಳಿಯ. 2 ಮತ್ತು 3ನೇ ಆರೋಪಿತರು ನನ್ನ ಅಳಿಯನ ತಂದೆ ತಾಯಿ.

2) ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿಲ್ಲ. ನನ್ನ ಮಗಳು ಮತ್ತು ಅಳಿಯ ಚನ್ನಾಗಿರುತ್ತಾರೆ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ. ನಿಪಿ.1 ಮತ್ತು 2 ರಲ್ಲಿರುವ ವಿಚಾರ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯಾಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕೆಂದು ಕೇಳಿಕೊಂಡಿರುತ್ತಾರೆ. ಆಲಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ಸಹಾಯ ಸರ್ಕಾರಿ ಅಭಿಯೋಜಕರಿಂದಃ

2. ಚಾಸಾ.1 ರವರನ್ನು 1 ನೇ ಆರೋಪಿಗೆ ಕೊಟ್ಟು ಹಾಗೂ ರೂ.1,10,000/- ನಗದು ಹಣ ಮತ್ತು ಬೆಳ್ಳಿಯ ಉಂಗುರ ಬ್ರಾಸ್ ಲೇಟ್ ನ್ನು ಕೊಟ್ಟು ಖರ್ಚು ವೆಚ್ಚಗಳನ್ನು ನೋಡಿಕೊಂಡು ಮದುವೆ ಮಾಡಿರುತ್ತೇವೆ ಎಂದರೆ ಸರಿ. ಆರೋಪಿತರು ಚಾಸಾ.1 ರವರನ್ನು ಮದವೆಯಾದ ಮೂರು ತಿಂಗಳ ವರಗೆ ಚನ್ನಾಗಿ ನೋಡಿಕೊಂಡು ಆನಂತರ ಸಣ್ಣ ಪುಟ್ಟ ವಿಚಾರಕ್ಕೆ ಬೈದಾಡುತ್ತಾ ದೈಹಿಕವಾಗಿ ಮತ್ತು ಮಾನಸಿಕವಾಗಿ ನಿನಗೆ ಇನ್ನೂ ಮಕ್ಕಳಾಗಿಲ್ಲ ಎಂದು ಬೈದಾಡಿ ನಿಮ್ಮ ಮನೆಯವರ ಹತ್ತಿರ ವರದಕ್ಷಿಣ ಹಣ ಮತ್ತು ಬಂಗಾರವನ್ನು ತೆಗೆದುಕೊಂಡು ಬಾ ಎಂದು ಪ್ರತಿದಿನ ಕಿರುಕುಳ ನೀಡುತ್ತಿದ್ದರು ಎಂದೆರ ಸರಿಯಲ್ಲ. ಸದರಿ ವಿಚಾರವನ್ನು ಚಾಸಾ.1 ರವರು ನನಗೆ ಮತ್ತು ಚಾಸಾ.5 ರಿಂದ 7 ರ ವರಗೆ ತಿಳಿಸಿದ್ದರು ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾವು ಆರೋಪಿತರಿಗೆ ಬುದ್ದಿ ಹೇಳಿ ಪಂಚಾಯಾತಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ದಿನಾಂಕಃ 24.04.2024 ರಂದು ಸಂಜೆ 6.30 ರ ಸಮಯದಲ್ಲಿ ನಾನು ಚಾಸಾ.1 ರವರನ್ನು ನಮ್ಮ ಮನೆಗೆ ಕರೆದುಕೊಂಡು ಹೋಗಲು ಬಂದಿದ್ದಾಗ ಆರೋಪಿತರು ನನಗೆ ಮತ್ತು ಚಾಸಾ.1 , 6 ಮತ್ತು 7 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಹಲ್ಲೆ ಮಾಡಿ ನಿಮ್ಮನ್ನು ಸುಮ್ಮನೆ ಬಿಡುವುದಿಲ್ಲ ಎಂದು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ಚಾಸಾ.1 ರವರು ನಿಪಿ.1 ರಂತೆ ದೂರು ನೀಡಿದ ಮೇರೆಗೆ ಪೋಲಿಸಿನವರು ನಿಪಿ.2 ರಂತೆ ಮಹಜರು ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ದಿನಾಂಕಃ 11.08.2024 ರಂದು " ನಾನು ------------------------------------- ನೀಡಿರುತ್ತೇನೆ “ ಎಂಬ ಹೇಳಿಕೆಯನ್ನು ನೀಡಿರುತ್ತೇನೆ ಎಂ ದರೆ ಸರಿಯಲ್ಲ. ತಿರಸ್ಕರಿಸಿದ ಹೇಳಿಕೆಯ ಭಾಗವನ್ನು ನಿಪಿ.12 ಎಂದು ಗುರುತಿಸಲಾಯಿತು.

2. ನಾವು ಮತ್ತು ಆರೋಪಿತರು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿಯಲ್ಲ. ಆರೋಪಿತರು ನಮ್ಮ ವಿರುದ್ಧ ದಾಖಲಿಸಿರುವ ಪ್ರಕರಣದಲ್ಲಿ

ರಾಜಿಯಾಗಿರುವುದರಿಂದ, ನಾವು ಈ ಪ್ರಕರಣದಲ್ಲಿ ರಾಜಿಯಾಗುತ್ತಿದ್ದೇವೆ ಎಂದರೆ ಸರಿಯಲ್ಲ. ಆ ಕಾರಣದಿಂದ ನನಗೆ ನಿಪಿ.1 ಮತ್ತು ನಿಪಿ.2 ರವರ ವಿಚಾರ ಗೊತ್ತಿದ್ದರೂ ಸಹಾ ಆರೋಪಿತರೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರುಃ ಇಲ್ಲ ಎಂದು ನುಡಿಯುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚುಗಾರ್ತಿಯ ಮೂಲಕ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ. ಸರಿ ಇದೆ.**

**02 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು,**
**ಮತ್ತು ಜೆಎಂಎಫ್ ಸಿ, ಚನ್ನಗಿರಿ.**